# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2020–21 ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಮಟ್ಟದಲ್ಲಿ ಕಾರ್ಯತಂಡ (Working Group) ವನ್ನು ರಚಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಕೃಇ 34 ಕೃಕೈಉ 2019(ಭಾ–1), ದಿ:23.07.2019.

2. ಸರ್ಕಾರದ ಆದೇಶ ಸಂಖ್ಯೆ: ಕೃಇ/83/ಕೃಕೈಉ/2020 ದಿ:07/08/2020.

3. ದಿನಾಂಕ:07/08/2020 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಇ–ಆಡಳಿತ ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕೃಷಿ ಇಲಾಖೆ ಇವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿದಂತೆ.

ಪ್ರಸ್ತಾವನೆ:

ಮೇಲೆ ಓದಲಾದ ಕ್ರ ಸಂ (1) ರಲ್ಲಿ ಸರ್ಕಾರದ ಆದೇಶದಲ್ಲಿ 2019–20ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಮಟ್ಟದಲ್ಲಿ ಉಸ್ತುವಾರಿ ಹಾಗೂ ಯೋಜನೆಯ ಅನುಷ್ಠಾನ ಪರಿಶೀಲನೆಗಾಗಿ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಒಳಗೊಂಡಂತೆ ಕಾರ್ಯ ತಂಡವನ್ನು ರಚಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರ.ಸಂ (2) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿ 2020–21ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಯೋಜನೆಯನ್ನು ಅನುಷ್ಠಾನಗೊಳಿಸಲು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ ಸಂ (3) ರಲ್ಲಿನ ಸಭೆಯಲ್ಲಿ 2020–21ನೇ ಸಾಲಿನಲ್ಲಿಯೂ ಸಹ ಬೆಳೆ ಸಮೀಕ್ಷೆ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಮಟ್ಟದಲ್ಲಿ ಉಸ್ತುವಾರಿ ಹಾಗೂ ಯೋಜನೆಯ ಅನುಷ್ಠಾನ ಪರಿಶೀಲನೆಗಾಗಿ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಒಳಗೊಂಡ

ಕಾರ್ಯತಂಡವನ್ನು (Working Group) ರಚಿಸುವ ಬಗ್ಗೆ ಚರ್ಚಿಸಲಾಗಿದ್ದು, ಸದರಿ ಕಾರ್ಯ ತಂಡವು ಕೃಷಿ ಆಯುಕ್ತಾಲಯದಲ್ಲಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ

**ಸರ್ಕಾರಿ ಆದೇಶ ಸಂಖ್ಯೆ: ಕೃಇ 83 ಕೃಕೈಉ 2020(ಭಾ-1), ಬೆಂಗಳೂರು, ದಿನಾಂಕ:10.08.2020**

2020-21 ನೇ ಸಾಲಿನಲ್ಲಿ ಬೆಳೆ ಸಮೀಕ್ಷೆಯ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಮಟ್ಟದಲ್ಲಿ ಉಸ್ತುವಾರಿ ಹಾಗೂ ಅನುಷ್ಠಾನದ ಪರಿಶೀಲನೆಗಾಗಿ ವಿವಿಧ ಇಲಾಖೆಗಳ ಈ ಕೆಳಕಂಡ ಅಧಿಕಾರಿಗಳನ್ನು ಒಳಗೊಂಡ ಕಾರ್ಯತಂಡವನ್ನು (Working Group) ರಚಿಸಿ ಆದೇಶಿಸಲಾಗಿದೆ.

| ಕ್ರ ಸಂ | ಶ್ರೀ/ಶ್ರೀಮತಿ<br>ಹುದ್ದೆ ಮತ್ತು ಪದನಾಮ |
|---|---|
| 1. | ಶ್ರೀ ಬಿ.ವೈ. ಶ್ರೀನಿವಾಸ್, ಕೃಷಿ ನಿರ್ದೇಶಕರು, ಕೃಷಿ ಆಯುಕ್ತಾಲಯ, ಬೆಂಗಳೂರು- **ಮುಖ್ಯಸ್ಥರು** |
| 2. | ಶ್ರೀ. ಆಂಟೋಣಿ ಮರಿಯಾ ಇಮ್ಯಾನ್ಯುಯಲ್, ಅಪರ ಕೃಷಿ ನಿರ್ದೇಶಕರು (ಬೆ ಅ & ಯೋ), ಕೃಷಿ ಆಯುಕ್ತಾಲಯ, ಬೆಂಗಳೂರು. |
| 3. | ಶ್ರೀ. ಶಕೀಲ್ ಅಹಮದ್, ಜಂಟಿ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು |
| 4. | ಶ್ರೀ. ಶ್ರೀವತ್ಸ, ಎಂ.ಎಸ್., ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಇ-ಆಡಳಿತ), ಬೆಂಗಳೂರು |
| 5. | ಶ್ರೀ. ಮಂಜುನಾಥ್, ಸಹಾಯಕ ಕೃಷಿ ನಿರ್ದೇಶಕರು, ಕ್ಷೇತ್ರ ಪ್ರಯೋಗಗಳು, ಕೃಷಿ ಆಯುಕ್ತಾಲಯ, ಬೆಂಗಳೂರು |
| 6 | ಶ್ರೀಮತಿ ಸುಮನ್ ನೆಲ್ಲಿಕೊಪ್ಪ, ಕೃಷಿ ಅಧಿಕಾರಿ, ಕೇಂದ್ರ ಕಛೇರಿ, ಕೃಷಿ ಇಲಾಖೆ, ಬೆಂಗಳೂರು |
| 7. | ಶ್ರೀ. ಮಹಮದ್ ರಫಿ, ಸಹಾಯಕ ತೋಟಗಾರಿಕ ನಿರ್ದೇಶಕರು, (ಯೋಜನೆ), ಕೇಂದ್ರ ಕಛೇರಿ, ತೋಟಗಾರಿಕೆ ಇಲಾಖೆ. ಲಾಲ್‌ಬಾಗ್, ಬೆಂಗಳೂರು. |

| | |
|---|---|
| 8. | ಕುಮಾರಿ ಶ್ರೀಲಕ್ಷ್ಮಿ, ಸಹಾಯಕ ತೋಟಗಾರಿಕೆ ಅಧಿಕಾರಿ, ಕೇಂದ್ರ ಕಛೇರಿ, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್, ಬೆಂಗಳೂರು. |
| 9 | ಶ್ರೀ. ಕೆ.ಎನ್. ವೆಂಕಟಾಚಲಪತಿ. ರೇಷ್ಮೆ ಸಹಾಯಕ ನಿರ್ದೇಶಕರು, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಕಛೇರಿ, ರೇಷ್ಮೆ ಇಲಾಖೆ, ಬೀರಸಂದ್ರ, ದೇವನಹಳ್ಳಿ |
| 10 | ಸಹಾಯಕ ಸಾಂಖ್ಯಿಕ ಅಧಿಕಾರಿ, ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು |
| 11 | ಸುರೇಶ್, GIS Analyst, ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಹಿಕ ಕೇಂದ್ರ, (KSRSAC) ಬೆಂಗಳೂರು. |

ಸಂಬಂಧಪಟ್ಟ ಇಲಾಖೆಗಳ ಮುಖ್ಯಸ್ಥರು ಮೇಲ್ಕಂಡ ಅಧಿಕಾರಿಗಳನ್ನು ಕೃಷಿ ಇಲಾಖೆಯ ಆಯುಕ್ತಾಲಯದಲ್ಲಿ ಬೆಳೆ ಸಮೀಕ್ಷೆ ಕಾರ್ಯ ನಿರ್ವಹಿಸಲು ಅನುವಾಗುವಂತೆ ತಕ್ಷಣವೇ ನಿಯೋಜಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

**ಸದರಿ ಕಾರ್ಯತಂಡದ ಜವಾಬ್ದಾರಿಗಳು ಈ ಕೆಳಗಿನಂತಿದೆ.**

1. ರಾಜ್ಯ ಮಟ್ಟದಲ್ಲಿ ಬೆಳೆ ಸಮೀಕ್ಷೆ ಕಾರ್ಯದ ಪ್ರತಿ ದಿನದ ಪ್ರಗತಿ ಪರಿಶೀಲನೆ ಹಾಗೂ ಉಸ್ತುವಾರಿ.
2. ಬೆಳೆ ಸಮೀಕ್ಷೆ ತಂತ್ರಾಂಶದಲ್ಲಿ ಸಮಸ್ಯೆಗಳುಂಟಾದಲ್ಲಿ ಸಂಬಂಧಪಟ್ಟ ಅಭಿವೃದ್ಧಿ ತಂಡದೊಂದಿಗೆ ಚರ್ಚಿಸಿ ಪರಿಹರಿಸುವುದು
3. ಬೆಳೆ ಸಮೀಕ್ಷೆಗಾರರ ದತ್ತಾಂಶದ ಗುಣಮಟ್ಟದ ನಿಯತಕಾಲಿಕ ಪರಿಶೀಲನೆ
4. ಬೆಳೆ ಸಮೀಕ್ಷೆಗಾರರ ಗೌರವಧನ ಪಾವತಿ ಪರಿಶೀಲನೆ
5. ನಿಯಮಿತವಾಗಿ ಕ್ಷೇತ್ರ ಮಟ್ಟದ ಅಧಿಕಾರಿಗಳೊಂದಿಗೆ ಸಮಾಲೋಚನೆ.
6. ಖಾಸಗಿ ನಿವಾಸಿ(PR)ಗಳೊಂದಿಗೆ ನಿರಂತರ ಸಮಾಲೋಚನೆ ಹಾಗೂ ಸಮಸ್ಯೆಗಳಿದ್ದಲ್ಲಿ ಪರಿಹರಿಸುವುದು.
7. ವಿವಿಧ ಹಂತದ ಅಧಿಕಾರಿಗಳಿಗೆ, ಸಭೆಗಳಿಗೆ, ಸಮಿತಿಗಳಿಗೆ ಅಗತ್ಯ ಮಾಹಿತಿ ಒದಗಿಸುವುದು.

8. ಅನುಷ್ಠಾನದ ವಿವಿಧ ಹಂತಗಳಲ್ಲಿ ಉದ್ಭವಿಸಬಹುದಾದ ಸಮಸ್ಯೆಗಳ ಪರಿಶೀಲನೆ, ಅಧ್ಯಯನ ಹಾಗೂ ಪರಿಹಾರ ಒದಗಿಸುವುದು.

9. ಯೋಜನೆಯ ಅನುಷ್ಠಾನದಲ್ಲಿ ತೊಡಗಿರುವ ವಿವಿಧ ಹಂತದ ಅಧಿಕಾರಿ/ಸಿಬ್ಬಂದಿ/ಖಾಸಗಿ ನಿವಾಸಿ (PR) ಗಳಿಗೆ ತರಬೇತಿ.

10. ಒಟ್ಟಾರೆಯಾಗಿ ಬೆಳೆ ಸಮೀಕ್ಷೆ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಎಲ್ಲ ರೀತಿಯ ಸಮನ್ವಯ, ಮೇಲ್ವಿಚಾರಣೆ, ಪ್ರಗತಿ ಪರಿಶೀಲನೆ, ಮಾಹಿತಿ ನೀಡಿಕೆ, ಸಮಸ್ಯೆಗಳಿಗೆ ಪರಿಹಾರ ಸೇರಿದಂತೆ ಎಲ್ಲ ರೀತಿಯ ಕಾರ್ಯ ನಿರ್ವಹಣೆ.

ಮುಂದುವರೆದು, ಸದರಿ ಅಧಿಕಾರಿಗಳು 2020-21 ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಕಾರ್ಯವು ಪೂರ್ಣಗೊಳ್ಳುವವರೆಗೆ ಆಯುಕ್ತರು, ಕೃಷಿ ಇಲಾಖೆ ರವರ ನೇತೃತ್ವದಲ್ಲಿ ಹಾಗೂ ಮಾರ್ಗದರ್ಶನದಲ್ಲಿ ಕಾರ್ಯನಿರ್ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

P. S'ah 10/8/2020
(ಪಿ.ಸತ್ಯಭಾಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(ಜಿ & ಎಸ್ ಎಸ್ ಎ) / (ಇ &ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು -01.
2. ಪ್ರಧಾನ ಮಹಾಲೇಖಪಾಲರು (A &E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.

5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ – ಆಡಳಿತ), ಬಹುಮಹಡಿ ಕಟ್ಟಡ, ಬೆಂಗಳೂರು
6. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬೆಂಗಳೂರು.
7. ಕೃಷಿ ಆಯುಕ್ತರು/ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್ ಬಾಗ್, ಬೆಂಗಳೂರು.
9. ಆಯುಕ್ತರು, ರೇಷ್ಮೆ ಇಲಾಖೆ, ಬೆಂಗಳೂರು.
10. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು
11. ನಿರ್ದೇಶಕರು, ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಹಿಕ ಕೇಂದ್ರ, (KSRSAC) ಬೆಂಗಳೂರು.
12. ಸಂಬಂಧಪಟ್ಟ ಅಧಿಕಾರಿಗಳಿಗೆ
13. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ

ಪ್ರತಿ ಮಾಹಿತಿಗಾಗಿ:

1.ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ ಬೆಂಗಳೂರು

2. ಸರ್ಕಾರದ ಉಪ ಕಾರ್ಯದರ್ಶಿ –1, ಕೃಷಿ ಇಲಾಖೆ, ಇವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ ಬೆಂಗಳೂರು

******